ಓಎಸ್‌ನಂ.154/2024

ಪಿ.ಡಬ್ಲ್ಯೂ- 1

ದಿನಾಂಕ: **09-01-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು:** ಪ್ರತಿವಾದಿ ಪರ ಶ್ರೀ ಎ ಜಿ ಪಿ ರವ**ರಿಂದ**

ತರೀಕೆರೆ ತಾಲ್ಲೂಕು, ಲಿಂಗದಹಳ್ಳಿ ಹೋಬಳಿ, ಕೆಂಚೇನಹಳ್ಳಿ ಗ್ರಾಮದಲ್ಲಿ ಒಟ್ಟು 398 ಎಕರೆ ಜಾಗ ಸರ್ಕಾರಿ ಗೋಮಾಳಕ್ಕೆ ಸೇರಿದ ಜಮೀನು ಆಗಿರುತ್ತದೆ ಎಂದರೆ ಸರಿ. ದಿ: 05-05-2022 ರಂದು ಅಧಿಸೂಚನೆ ಸಂಖ್ಯೆ ಎಪಿಜಿ 185 ಎಫ್ ಎ ಎ ಎಫ್ 2011 ಯಂತೆ 82.28 ಹೆಕ್ಟೇರ್ ಜಾಗವನ್ನು ಡಿಮಡ್ ಫಾರೆಸ್ಟ್ ಎಂದು ಘೋಷಣೆ ಮಾಡಿರುತ್ತಾರೆಂದರೆ ಸಾಕ್ಷಿ ಸರ್ಕಾರದ ಜಾಗ ಆಗಿರುತ್ತದೆ ಎಂದುನುಡಿದಿರುತ್ತಾರೆ. ಸದರಿ ಜಾಗವು ಅರಣ್ಯದ ಪ್ರದೇಶ ಆಗಿರುತ್ತದೆ ಎಂದರೆ ಸಾಕ್ಷಿ ಸರ್ಕಾರದ ಜಾಗ ಆಗಿರುತ್ತದೆ ಎಂದು ನುಡಿದಿರುತ್ತಾರೆ. ಅರಣ್ಯ ಪ್ರದೇಶ ಮತ್ತು ಸರ್ಕಾರ ಎರಡೂ ಒಂದೇ ಆಗಿರುತ್ತದೆ ಎಂದರೆ ಸಾಕ್ಷಿ ಅರಣ್ಯ ಪ್ರದೇಶದ ಜಾಗ ಮತ್ತು ಸರ್ಕಾರದ ಜಾಗ ಬೇರೆ ಬೇರೆ ಆಗಿರುತ್ತದೆ ಎಂದು ನುಡಿದಿರುತ್ತಾರೆ. ಸರ್ವೆ ನಂ.12 ರಲ್ಲಿ ದಾವ ಸ್ವತ್ತಾದ 4 ಎಕರೆ 20 ಗುಂಟೆ ಸರ್ಕಾರದ ಸ್ವಾಧೀನದಲ್ಲಿದ್ದು, ಅರಣ್ಯ ಪ್ರದೇಶದ ವಿವಿಧ ಸಸ್ಯ ಪ್ರಭೇದಗಳಿಂದ ಕೂಡಿರುತ್ತದೆ ಎಂದರೆ ಸಾಕ್ಷಿ ಸರ್ಕಾರದ ಜಾಗ ಆಗಿರುತ್ತದೆ ಎಂದು ನುಡಿದಿರುತ್ತಾರೆ.

ನೀವು ಬಗರ್ ಹುಕುಂ ಅಡಿಯಲ್ಲಿ ದಾವ ಸ್ವತ್ತನ್ನು ಸಾಗುವಳಿ ಮಾಡುತ್ತಿದ್ದೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಾ ಎಂದರೆ ಸರಿಯಲ್ಲ. ಫಾರಂ 57 ಅಡಿಯಲ್ಲಿ ಅರ್ಜಿಯನ್ನು ಸಲ್ಲಿಸಿದ್ದು, ಆದರೆ ತಹಶೀಲ್ದಾರ್ ರವರಿಗೆ ಅರಣ್ಯ ಇಲಾಖೆಯ ಜಾಗವನ್ನು ಮಂಜೂರಿ ಮಾಡಲು ಯಾವುದೇ ಅಧಿಕಾರ ಇಲ್ಲ ಎಂದರೆ ಸಾಕ್ಷಿ ಅದು ಸರ್ಕಾರಕ್ಕೆ ಸೇರಿದ ಜಾಗ ಆಗಿರುತ್ತದೆ ಎಂದು ನುಡಿದಿರುತ್ತಾರೆ. ಫಾರಂ 57 ದಾಖಲಾತಿಯನ್ನು ಈ ದಾವೆಗೋಸ್ಕರ ಸೃಷ್ಠಿ ಮಾಡಿರುತ್ತಿರಾ ಎಂದರೆ ಸರಿಯಲ್ಲ. ಫಾರಂ 57 ನ್ನು ತಹಶೀಲ್ದಾರ್ ರವರಿಗೆ ನೀಡಿದ ಬಗ್ಗೆ ಮತ್ತು ಅವರು ಸ್ವೀಕರಿಸಿದ ಬಗ್ಗೆ ಯಾವುದೇ ಸಹಿ ಆಗಲೀ ಮೊಹರು ಆಗಲಿ ಇರುವುದಿಲ್ಲ ಎಂದರೆ ಸರಿಯಲ್ಲ. ಲಿಂಗದಹಳ್ಳಿ ಹೋಬಳಿ ನಂದಿ ಗ್ರಾಮದ ಸರ್ವೆ ನಂ.140 ರಲ್ಲಿ 4 ಎಕರೆ 20 ಗುಂಟೆ ಜಾಗವು ನಿಮ್ಮ ಹೆಂಡತಿ ಹೆಸರಿನಲ್ಲಿ ಮಂಜೂರಾಗಿದೆ ಎಂದು

ಇದೇ ನ್ಯಾಯಾಲಯದಲ್ಲಿ ದಾವೆ ಸಲ್ಲಿಸಿರುತ್ತೀರಾ ಎಂದರೆ ಸರಿ. ಸರ್ಕಾರವು ಒಂದು ಕುಟುಂಬದಲ್ಲಿ ಇಬ್ಬರು ವ್ಯಕ್ತಿಗಳಿಗೆ ಎರಡು ಜಮೀನನ್ನು ಮಂಜೂರಿ ಮಾಡುವುದಿಲ್ಲ, ಸರ್ಕಾರದ ಆಸ್ತಿಯನ್ನು ಲಪಾಟಯಿಸುವ ಉದ್ದೇಶದಿಂದ ಸುಳ್ಳು ದಾಖಲಾತಿಯನ್ನು ಸೃಷ್ಠಿ ಮಾಡಿ ಸುಳ್ಳು ದಾವೆಯನ್ನು ಹೂಡಿರುತ್ತೀರಾ ಎಂದರೆ ಸರಿಯಲ್ಲ. ನಿಪಿ-9 ಮತ್ತು 10 ರ ಛಾಯಚಿತ್ರಗಳನ್ನು ಈ ದಾವೆಗೋಸ್ಕರ ಸೃಷ್ಠಿ ಮಾಡಿರುತ್ತೀರಾ ಎಂದರೆ ಸರಿಯಲ್ಲ. ಅದು ಸರ್ಕಾರದ ಸ್ವಾಧೀನಕ್ಕೆ ಸೇರಿದ ಅರಣ್ಯ ಪ್ರದೇಶವಾಗಿರುತ್ತದೆ ಎಂದರೆ ಸರಿಯಲ್ಲ. ನೀವೇ ಸರ್ಕಾರದ ಸ್ವಾಧೀನದಲ್ಲಿರುವ ಅರಣ್ಯ ಪ್ರದೇಶವನ್ನು ಅಕ್ರಮಾಗಿ ಸಾಗುವಳಿ ಮಾಡಲು ಹೋದಾಗ ಅರಣ್ಯ ಇಲಾಖೆಯವರು ನಿಮ್ಮನ್ನು ತಡೆದ ಕಾರಣ ಅವರಿಗೆ ತೊಂದರೆ ಕೊಡುವ ಉದ್ದೇಶದಿಂದ ಈ ದಾವೆ ಹೂಡಿರುತ್ತೀರಾ ಎಂದರೆ ಸರಿಯಲ್ಲ. ನಿಪಿ-1 ರಿಂದ 8 ದಾಖಲಾತಿಗಳನ್ನು ಈ ದಾವೆಗೋಸ್ಕರ ಸೃಷ್ಠಿ ಮಾಡಿರುತ್ತೀರಾ ಎಂದರೆ ಸರಿಯಲ್ಲ.

ರು ವಿಚಾರಣೆ: ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

Sd/-

1 ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**